ಊ) ಹಾಗಿದ್ದಲ್ಲಿ ಈ ತಾರತಮ್ಯ ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸರ್ಕಾರಿ ಆದೇಶ ಸಂಖ್ಯೆ ಡಿಪಿಎಆರ್ 4 ಎಸ್‌ಟಿಆರ್ 2001 ಬೆಂ. ದಿನಾಂಕ 22–11–2001 ರಂತೆ ಬೋಧಕೇತರ ಸರ್ಕಾರಿ ನೌಕರರಿಗೆ ಪ್ರತ್ಯೇಕವಾದ ವರ್ಗಾವಣೆ ಮಾರ್ಗಸೂಚಿ ಇರುತ್ತದೆ.

ಆ) ದ್ವಿತೀಯ ದರ್ಜೆ ಸಹಾಯಕ ಪ್ರಥಮ ದರ್ಜೆ ಸಹಾಯಕ ಹಾಗೂ ಅಧೀಕ್ಷಕರು 'ಸಿ' ದರ್ಜೆ ನೌಕರರಾಗಿದ್ದು ಒಂದು ಕಚೇರಿಯಲ್ಲಿ ಕನಿಷ್ಠ 5 ವರ್ಷಗಳ ಅವಧಿಗೆ ಸೇವೆ ಸಲ್ಲಿಸಬಹುದು.

ಇ) ಪುನಃ ಅದೇ ಸ್ಥಳಕ್ಕೆ ವರ್ಗಾವಣೆ ಮಾಡುವುದನ್ನು ತಪ್ಪಿಸಲು ಅವಕಾಶವಿರುವುದಿಲ್ಲ.

ಈ) ಬೋಧಕೇತರ ಸಿಬ್ಬಂದಿ ವರ್ಗದವರು ಇಲಾಖೆಯ ಕಚೇರಿ ಹಾಗೂ ಶಾಲೆಗಳಲ್ಲಿ ಕೆಲಸ ನಿರ್ವಹಿಸಲು ಅವಕಾಶವಿರುತ್ತದೆ. ಅಂದರೆ ಇರುವಂತಹ ಖಾಲಿ ಹುದ್ದೆಗಳನ್ನು ಕನಿಷ್ಠ ಸೇವೆ ಸಲ್ಲಿಸಿದಂತಹ ನೌಕರರು ಕೋರಿಕೆ ಮೇರೆಗೆ ವರ್ಗಾವಣೆ ಕೇಳಿಕೊಂಡಾಗ ಸರ್ಕಾರದ ವರ್ಗಾವಣೆ ಮಾರ್ಗಸೂಚಿಯಂತೆ ಪರಿಗಣಿಸಲಾಗುತ್ತದೆ.

ಉ) ಗಮನಕ್ಕೆ ಬಂದಿದೆ.

ಊ) ತಾರತಮ್ಯ ನಿವಾರಣೆಗೆ ವರ್ಗಾವಣೆ ಮಾರ್ಗಸೂಚಿಯಡಿ ಪರಿಶೀಲಿಸಲಾಗುವುದು.

ಪ್ರೌಢಶಾಲೆ ನಿರ್ಮಾಣ

166 : (245)

ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು)

ಅ) ಗೌರಿಬಿದನೂರು ತಾಲ್ಲೂಕು ಸೊಣಗಾನಹಳ್ಳಿ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆ ಕಟ್ಟಡ ಕಟ್ಟಲು 2 ಎಕರೆ ಜಮೀನು ಕೋರಿ ಒಂದು ವರ್ಷದ ಹಿಂದೆಯೇ ಅರ್ಜಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಕೋರಿಕೆಯಂತೆ ಜಮೀನನ್ನು ಹಸ್ತಾಂತರ ಮಾಡದೇ ಇರಲು ಕಾರಣವೇನು ಯಾವಾಗ ಹಸ್ತಾಂತರ ಮಾಡಲಾಗುವುದು ?

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಗಮನಕ್ಕೆ ಬಂದಿರುತ್ತದೆ.

ಆ) ಸೊನಗಾನಹಳ್ಳಿ ಗ್ರಾಮದ ಕೆಲವು ಗ್ರಾಮಸ್ಥರು ಸದರಿ ಜಮೀನಿನ ವಿಷಯವಾಗಿ ಜೆಎಂಎಫ್‌ಸಿ ಗೌರಿಬಿದನೂರು ಈ ನ್ಯಾಯದಲ್ಲಿ ದಾವೆ ಸಂಖ್ಯೆ ಓಎಸ್ 316/11, 334/11, 333/11 315/11 ರಲ್ಲಿ ದಾವೆ ಹೂಡಿರುತ್ತಾರೆ. ದಾವೆ ಇತ್ಯರ್ಥವಾದ ನಂತರ ಹಸ್ತಾಂತರ ಮಾಡಲಾಗುವುದು.

ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಹೆಚ್ಚುವರಿ ಕೊಠಡಿಗಳು

169 : (77)

ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ)

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಹೆಚ್ಚುವರಿ ಕೊಠಡಿಗಳಿಗಾಗಿ ಯಾವ ಯಾವ ಕಾಲೇಜುಗಳಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ (ವಿವರ ನೀಡುವುದು)

ಆ) ಈ ಬಗ್ಗೆ ಸರ್ಕಾರ ಕೈ ಗೊಂಡಿರುವ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಚಿಕ್ಕನಾಯಕನಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಮಾತ್ರ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಪ್ರಸ್ತಾಪಿಸಲಾಗಿದೆ.

ಆ) ವಿವಿಧ ಯೋಜನೆಗಳಡಿ ಅನುದಾನದ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಹೆಚ್ಚುವರಿ ಕೊಠಡಿ ನಿರ್ಮಿಸಲು ಕ್ರಮ ವಹಿಸಲಾಗುತ್ತಿದೆ.

ಗುಂಡೇಹಳ್ಳಿ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜು

160 : (91)

ಶ್ರೀ ರುದ್ರೇಶ್ ಗೌಡ ವೈ.ಎಸ್. (ಬೇಲೂರು)

ಅ) ಬೇಲೂರು ತಾಲ್ಲೂಕು ಗುಂಡೇನಹಳ್ಳಿ ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ.

ಆ) ಈ ಪದವಿ ಪೂರ್ವ ಕಾಲೇಜಿಗೆ ಸ್ವಂತ ಕಟ್ಟಡವಿಲ್ಲದೆ ಸರ್ಕಾರಿ ಪ್ರೌಢಶಾಲೆ ಕಟ್ಟಡದಲ್ಲಿ ತರಗತಿಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ.

ಇ) ಹಾಗಿದ್ದಲ್ಲಿ ಈ ಪದವಿ ಪೂರ್ವ ಕಾಲೇಜಿಗೆ ಸ್ವಂತ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?